# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಮಡಿಕೇರಿ ಜಿಲ್ಲೆ ವಿರಾಜಪೇಟೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ. ನಅಇ 437 ಮೈಅಪ್ರಾ 2005, ದಿನಾಂಕ: 25.1.06.

೨) ವಿರಾಜಪೇಟೆ ಪಟ್ಟಣ ಪಂಚಾಯಿತಿಯ ಪತ್ರ ಸಂಖ್ಯೆ. ಪ.ಪಂ.ವಿ/ ವಿ.ಮಾ.ಪ್ಲಾ/ಅಂತಿಮ/2007-08, ದಿನಾಂಕ: 30.8.07 ಹಾಗೂ 12.11.07.

೩) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ.ನಯೋ(18):ವಿರಾಜಪೇಟೆ.ಮ.ಯೋ.ಅಂ:4979:2008.

<u>ಪ್ರಸ್ತಾವನೆ:</u>

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಮಡಿಕೇರಿ ಜಿಲ್ಲೆ, ವಿರಾಜಪೇಟೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ವಿರಾಜಪೇಟೆ ಪಟ್ಟಣ ಪಂಚಾಯಿತಿಯು ವಿರಾಜಪೇಟೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ಇಲಾಖೆಯ ಮುಖಾಂತರ ಸಲ್ಲಿಸಲಾಗಿದೆ.

ಮೇಲೆ ಓದಲಾದ (3) ರ ಏಕ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ವಿರಾಜಪೇಟೆ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 24,000 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಒಟ್ಟು 263 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 157.54 ಹೆಕ್ಟೇರ್ (ಶೇ.60.60), ವಾಣಿಜ್ಯಕ್ಕಾಗಿ 13.12 ಹೆಕ್ಟೇರ್ (ಶೇ.5.04), ಕೈಗಾರಿಕೆಗಾಗಿ 8.82 ಹೆಕ್ಟೇರ್ (ಶೇ.3.39), ಸಾರ್ವಜನಿಕ: ಅರೆ ಸಾರ್ವಜನಿಕ ವಲಯಕ್ಕಾಗಿ 17.34 ಹೆಕ್ಟೇರ್ (ಶೇ.6.68), ನಾಗರೀಕ ಸೌಲಭ್ಯಕ್ಕಾಗಿ 0.22 ಹೆಕ್ಟೇರ್ (ಶೇ.0.08), ಉದ್ಯಾನವನ: ಬಯಲು ಜಾಗಗಾಗಿ 22.64 ಹೆಕ್ಟೇರ್ (ಶೇ.8.71), ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 40.30 ಹೆಕ್ಟೇರ್ (ಶೇ.15.50) ಪ್ರದೇಶವನ್ನು ನಿಗಧಿಪಡಿಸಿ ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(3) ರನ್ವಯ ಅಂತಿಮ ಅನುಮೋದನೆ

676
21/2/08

ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಈ ವಿಷಯವನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ. ನಅಇ 33 ಮೈಅಪ್ರಾ 2008, ಬೆಂಗಳೂರು, ದಿನಾಂಕ: 16.2.2008.</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಡಿಕೇರಿ ಜಿಲ್ಲೆ, ವಿರಾಜಪೇಟೆ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಭಾರತ ರಾಷ್ಟ್ರಾಧ್ಯಕ್ಷರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧. ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ.
೨. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೩. ಮುಖ್ಯಾಧಿಕಾರಿಗಳು, ವಿರಾಜಪೇಟೆ ಪಟ್ಟಣ ಪಂಚಾಯಿತಿ, ವಿರಾಜಪೇಟೆ.
೪. ನಗರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಮೈಸೂರು.
೫. ನಗರ ಯೋಜನಾ ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಮಡಿಕೇರಿ.
೬. ಘನತೆವೆತ್ತ ರಾಜ್ಯಪಾಲರ ಸಲಹೆಗಾರರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
೭. ಕರ್ನಾಟಕ ರಾಜ್ಯಪತ್ರ.
೮. ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
೯. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.